# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ –145ರ ವಾರ್ಡ್ ಸಭೆಯ ನಡವಳಿ

ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಹೊಂಬೇಗೌಡನಗರ ವಾರ್ಡ್–145 ರಲ್ಲಿ ವಾರ್ಡ್ ಸಭೆಯನ್ನು ಮಾನ್ಯ ಶ್ರೀಮತಿ. ಲಕ್ಷ್ಮೀದೇವಿ ಆರ್. ಉಪ ಆಯುಕ್ತರು ಕಂದಾಯ (ದಕ್ಷಿಣ), ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಯವರ ಅಪ್ಪಣೆ ಮೇರೆಗೆ ದಿನಾಂಕ:05/03/2022ರ ಶನಿವಾರದಂದು ಮಧ್ಯಾಹ್ನ 3.00 ಗಂಟೆಗೆ ವಾರ್ಡ್ ಕಮಿಟಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ವ್ಯಾಪ್ತಿಯಲ್ಲಿನ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಸದಸ್ಯರಿಗೆ ಆಹ್ವಾನ ನೀಡಿದ್ದು, ಸಭೆಗೆ ಹಾಜರಾಗಿರುವ ಎಲ್ಲರಿಗೂ ಸ್ವಾಗತ ಕೋರುತ್ತಾ, ವಾರ್ಡ್ ಸಮಿತಿ ಸಭೆಯ ಅಧ್ಯಕ್ಷರ ಅಧ್ಯಕ್ಷತೆಯೊಂದಿಗೆ ಸಭೆಯನ್ನು ನಡೆಸಲಾಯಿತು.

**ಹಾಜರಿದ್ದವರು:–**

1. ಉಪ ಆಯುಕ್ತರು (ದಕ್ಷಿಣ) ಹಾಗೂ ವಾರ್ಡ್ 145ರ ನೋಡಲ್ ಅಧಿಕಾರಿ.
2. ಕೆಲಸ ಪರಿವೀಕ್ಷಕರು ವಾರ್ಡ್–145
3. ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್–145.
4. ಕಿರಿಯ ಇಂಜಿನಿಯರ್ (ವಿದ್ಯುತ್ ವಿಭಾಗ ಬಿಬಿಎಂಪಿ).
5. ತೋಟಗಾರಿಕೆ ಇಲಾಖೆ, ಮೇಸ್ತ್ರಿ ವಾರ್ಡ್ 145.
6. ವಿಲ್ಸನ್‌ಗಾರ್ಡನ್ ಪೊಲೀಸ್ ಠಾಣೆ ಕಾನೂನು ಸುವ್ಯವಸ್ಥೆ ವಾರ್ಡ್ 145.
7. ನಾಗರೀಕ ಕಲ್ಯಾಣ ಸಂಘದ ಸದಸ್ಯರು ಮತ್ತು ಸಾರ್ವಜನಿಕರು.

**ಸಭೆಗೆ ಗೈರು ಹಾಜರಾದ ಇಲಾಖೆಗಳು:–**

1. ಸಹಾಯಕ ಇಂಜಿನಿಯರ್ (BWSSB)
2. ಪೊಲೀಸ್ ಇಲಾಖೆ ಅಧಿಕಾರಿಗಳು (ಕಾನೂನು ಸುವ್ಯವಸ್ಥೆ) ಆಡುಗೋಡಿ.
3. ವಿಲ್ಸನ್‌ಗಾರ್ಡನ್ ಪೊಲೀಸ್ ಠಾಣೆ ಸಂಚಾರ ವಾರ್ಡ್ 145.
4. ಸಹಾಯಕ ಇಂಜಿನಿಯರ್ (ಬೆಸ್ಕಾಂ)
5. ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಇಲಾಖೆಯವರು.

*********

1. ವಾರ್ಡ್ ವ್ಯಾಪ್ತಿಯ ವಿಲ್ಸನ್‌ಗಾರ್ಡನ್ 13ನೇ ಅಡ್ಡರಸ್ತೆಯಲ್ಲಿ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಮ್ಯಾನ್‌ಹೋಲ್‌ನಿಂದ ಹೊರಕ್ಕೆ ತೆಗೆದಿರುವ ಮಣ್ಣನ್ನು ತೆರವುಗೊಳಿಸಲು ಸಾರ್ವಜನಿಕರು ಕೋರಿದರು. ನೋಡಲ್ ಅಧಿಕಾರಿಯವರು ಮಾತನಾಡಿ ಈ ಬಗ್ಗೆ ಕ್ರಮ ವಹಿಸಲು BWSSB ಇಲಾಖೆಯವರಿಗೆ ಮಣ್ಣನ್ನು ತೆರವುಗೊಳಿಸುವಂತೆ ನಿರ್ದೇಶನ ನೀಡಲಾಗುವುದೆಂದು ಸಭೆಯಲ್ಲಿ ತಿಳಿಸಿದರು.



Scanned with CamScanner

2. ವಾರ್ಡ್ ವ್ಯಾಪ್ತಿಯ ವಿಲ್ಸನ್‌ಗಾರ್ಡನ್ 8ನೇ ಅಡ್ಡರಸ್ತೆ, 9ನೇ ಅಡ್ಡರಸ್ತೆ, 9ನೇ "ಎ" ಅಡ್ಡರಸ್ತೆ ಮತ್ತು 10ನೇ ಅಡ್ಡರಸ್ತೆಗಳು ಹಾಳಾಗಿರುವುದಾಗಿ ವಿಲ್ಸನ್‌ಗಾರ್ಡನ್ ವೆಲ್‌ಫೇರ್ ಅಸೋಸಿಯೇಷನ್ ರವರು ದೂರಿದರು. ಈ ವಿಷಯವಾಗಿ ಅಧ್ಯಕ್ಷರು ಮಾತನಾಡಿ ವಾರ್ಡ್‌ನಲ್ಲಿ ಡಾಂಬರೀಕರಣ ಕಾಮಗಾರಿ ಪ್ರಗತಿಯಲ್ಲಿದ್ದು, ಅತಿ ಶೀಘ್ರವಾಗಿ ಸದರಿ ರಸ್ತೆಗಳಿಗೆ ಡಾಂಬರೀಕರಣ ಮಾಡಲಾಗುವುದೆಂದು ಸಭೆಗೆ ತಿಳಿಸಿದರು.

3. ವಾರ್ಡ್ ವ್ಯಾಪ್ತಿಯಲ್ಲಿನ ಹೂವಿನ ಅಂಗಡಿಗಳಿಂದ ಸ್ಥಳೀಯ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆಗಳ ಬಗ್ಗೆ ನಾಗರೀಕರು ಸಭೆಯಲ್ಲಿ ಚರ್ಚಿಸಿದರು, ಮನೆಗಳಲ್ಲಿ ಹೂವಿನ ಅಂಗಡಿಗಳನ್ನು ನಡೆಸುತ್ತಿದ್ದು, ಸದರಿ ಮನೆಗಳಿಂದ ಅಂಗಡಿಗಳನ್ನು ತೆರವುಗೊಳಿಸಲು ಕೋರಿದರು – ಆರೋಗ್ಯ ಇಲಾಖೆಯಿಂದ ಹಿರಿಯ ಆರೋಗ್ಯ ಪರಿವೀಕ್ಷಕರು ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿದರು.

4. ವಿಲ್ಸನ್‌ಗಾರ್ಡನ್ ವ್ಯಾಪ್ತಿಯ ಆನೆ ಪಾರ್ಕ್‌ನಲ್ಲಿ ನಿರ್ವಹಣೆ ಸಮರ್ಪಕವಾಗಿಲ್ಲವೆಂದು ಹಾಗೂ ವಿದ್ಯುತ್ ವ್ಯವಸ್ಥೆ ಸರಿಯಾಗಿಲ್ಲವೆಂದು ಸ್ಥಳೀಯರು ದೂರಿದರು – ಸದರಿ ಪಾರ್ಕ್‌ನ ಅಭಿವೃದ್ಧಿ ಕಾಮಗಾರಿಯು ಸಧ್ಯದಲ್ಲೇ ಪ್ರಾರಂಭವಾಗುತ್ತದೆ ಎಂದು ನೋಡಲ್ ಅಧಿಕಾರಿಯವರು ಸಭೆಗೆ ತಿಳಿಸಿದರು.

5. ನೋಡಲ್ ಅಧಿಕಾರಿಯವರು ಮಾತನಾಡಿ ವಿಲ್ಸನ್‌ಗಾರ್ಡನ್ ವಿದ್ಯುತ್ ಚಿತಾಗಾರದ ಬಗ್ಗೆ ಮಾತನಾಡಿ ಪರಿಶೀಲನೆ ನಡೆಸಬೇಕಾಗಿದ್ದು, ದಿನಾಂಕವನ್ನು ನಿಗಧಿಪಡಿಸುವಂತೆ ಸಭೆಯಲ್ಲಿ ತಿಳಿಸಿದರು.

6. ನೋಡಲ್ ಅಧಿಕಾರಿಯವರು ಮಾತನಾಡಿ ವಿದ್ಯುತ್ ಲೈಟ್ಸ್‌ಗಳ ಟೆಂಡರ್ ಪ್ರಗತಿಯ ಬಗ್ಗೆ ಮಾಹಿತಿ ಒದಗಿಸುವಂತೆ ಕೋರಿದರು. ಸಭೆಯಲ್ಲಿ ಹಾಜರಿದ್ದ ಕಿರಿಯ ಇಂಜಿನಿಯರ್ ವಿದ್ಯುತ್ ವಿಭಾಗ ರವರು ಮಾಹಿತಿ ಒದಗಿಸುವುದಾಗಿ ತಿಳಿಸಿದರು.

7. ವಿಲ್ಸನ್‌ಗಾರ್ಡನ್ ಹೆಚ್. ಸಿದ್ದಯ್ಯ ಮುಖ್ಯರಸ್ತೆಯಲ್ಲಿರುವ ರಾಣಿಪಾರ್ಕ್‌ಗೆ ಹೊಂದಿಕೊಂಡಂತಿರುವ ಪಾದಚಾರಿ ಮಾರ್ಗದ ಮೇಲೆ ಹಳೆಯ ದೇವಸ್ಥಾನ ಇರುವ ಬಗ್ಗೆ ದೂರನ್ನು ನೀಡಿದರು. ಪಾಲಿಕೆಯ ವ್ಯಾಪ್ತಿಯಲ್ಲಿ ಈ ರೀತಿ ಪಾದಚಾರಿ ಮಾರ್ಗದ ಮೇಲೆ ಹಲವಾರು ದೇವಸ್ಥಾನಗಳಿದ್ದು, ರಾಣಿಪಾರ್ಕ್‌ಗೆ ಹೊಂದಿಕೊಂಡಂತಿರುವ ಪಾದಚಾರಿ ಮಾರ್ಗದ ಮೇಲೆ ಹಳೆಯ ದೇವಸ್ಥಾನದ ಬಗ್ಗೆಯೂ ಸಹ ವರದಿ ಸಲ್ಲಿಸಲಾಗಿದ್ದು, ಮೇಲಾಧಿಕಾರಿಗಳ ನಿರ್ದೇಶನದಂತೆ ಮುಂದಿನ ಕ್ರಮ ವಹಿಸುವುದಾಗಿ ಸಭೆಯಲ್ಲಿ ಚರ್ಚಿಸಲಾಯಿತು.



Scanned with CamScanner

8. ವಿಲ್ಸನ್‌ಗಾರ್ಡನ್ 8ನೇ ಅಡ್ಡರಸ್ತೆಯಲ್ಲಿರುವ ಅಗಡಿ ಆಸ್ಪತ್ರೆ ಪಕ್ಕದಲ್ಲಿ ಪಾದಚಾರಿ ಮಾರ್ಗದ ಮೇಲೆ ಬೆಂಚ್‌ಗಳನ್ನು ಅಳವಡಿಸಲಾಗಿದ್ದು, ಅದನ್ನು ತೆರವುಗೊಳಿಸುವಂತೆ ಸಭೆಯಲ್ಲಿ ಸ್ಥಳೀಯರು ದೂರಿದರು. ನೋಡಲ್ ಅಧಿಕಾರಿಯವರು ಮಾತನಾಡಿ ಶೀಘ್ರವಾಗಿ ಸದರಿ ಬೆಂಚ್‌ಗಳನ್ನು ತೆರವುಗೊಳಿಸುವ ಬಗ್ಗೆ ಕ್ರಮ ವಹಿಸಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

9. ವಿಲ್ಸನ್‌ಗಾರ್ಡನ್ 3ನೇ ಅಡ್ಡರಸ್ತೆ ಮತ್ತು 4ನೇ ಅಡ್ಡರಸ್ತೆಯಲ್ಲಿ ಡೆಬ್ರಿಸ್ ಇದ್ದು, ತೆರವುಗೊಳಿಸುವಂತೆ ಸಳೀಯರು ಕೋರಿದರು. ನೋಡಲ್ ಅಧಿಕಾರಿಯವರು ಮಾತನಾಡಿ ಕೂಡಲೇ ಡೆಬ್ರಿಸ್‌ನ್ನು ತೆರವುಗೊಳಿಸುವಂತೆ ವಾರ್ಡಿನ ಕೆಲಸ ಪರಿವೀಕ್ಷಕರಿಗೆ ಸಭೆಯಲ್ಲಿ ತಿಳಿಸಿದರು.

10. ವಿಲ್ಸನ್‌ಗಾರ್ಡನ್ 11ನೇ ಅಡ್ಡರಸ್ತೆಯಲ್ಲಿ Milky Mist ಫ್ಯಾಕ್ಟರಿ ಇದ್ದು, ದಿನದ 24 ಗಂಟೆಯೂ Refrigerator ಶಬ್ಧ ಇರುವುದರಿಂದ ಸ್ಥಳೀಯ ನಿವಾಸಿಗಳಿಗೆ ತೊಂದರೆಯಾಗುತ್ತಿದೆ ಎಂದು ಸಭೆಗೆ ತಿಳಿಸಿದರು – ಸದರಿ ವಿಷಯದ ಬಗ್ಗೆ ಹಿರಿಯ ಆರೋಗ್ಯ ಪರಿವೀಕ್ಷಕರು ಪರಿಶೀಲಿಸಿ ಕ್ರಮ ಕೈಗೊಳ್ಳಲು ಅಧ್ಯಕ್ಷರು ತಿಳಿಸಿದರು.

11. ಬಿಟಿಎಸ್ ಮುಖ್ಯರಸ್ತೆಯಲ್ಲಿ ಅನಧಿಕೃತವಾಗಿ ನಿಲುಗಡೆ ಮಾಡಿರುವ ವಾಹನಗಳನ್ನು ತೆರವುಗೊಳಿಸುವಂತೆ ಸ್ಥಳೀಯರು ಕೋರಿದರು. ನೋಡಲ್ ಅಧಿಕಾರಿಯವರು ಮಾತನಾಡಿ ಪೊಲೀಸ್ ಇಲಾಖೆಯೊಂದಿಗೆ ಸಮನ್ವಯ ಸಾಧಿಸಿಕೊಂಡು ಶೀಘ್ರವಾಗಿ ಇದರ ಬಗ್ಗೆ ಕ್ರಮ ವಹಿಸಲು ಸಭೆಯಲ್ಲಿ ತಿಳಿಸಿದರು.

12. ವಾರ್ಡಿನ ಸ್ಥಳೀಯರು ಮಾತನಾಡಿ ವಾರ್ಡಿನ ವ್ಯಾಪ್ತಿಯಲ್ಲಿ ಅಳವಡಿಸಲಾಗಿರುವ ಸಿ.ಸಿ. ಕ್ಯಾಮರಾಗಳ ವಿವರಗಳನ್ನು ಕೋರಿದರು. ಅದರಂತೆ ನೋಡಲ್ ಅಧಿಕಾರಿಯವರು ಮಾತನಾಡಿ ಮುಂದಿನ ಸಭೆಯಲ್ಲಿ ಸಿ.ಸಿ. ಕ್ಯಾಮರಾಗಳ ವಿವರಗಳನ್ನು ಸಭೆಗೆ ಸಲ್ಲಿಸುವಂತೆ ನಿರ್ದೇಶನ ನೀಡಿದರು.

ಮೇಲಿನ ಈ ಎಲ್ಲಾ ಚಟುವಟಿಕೆಗಳನ್ನು ಕ್ರಮಬದ್ಧವಾಗಿ ಸಂಬಂಧಪಟ್ಟ ಇಲಾಖಾವಾರು ಸಮನ್ವಯ ಸಾಧಿಸಿಕೊಂಡು ನಿರ್ವಹಿಸಲು ಎಲ್ಲಾ ಸಿಬ್ಬಂಧಿ ವರ್ಗದವರು ಒಂದುಗೂಡಿ ಈ ಕಾರ್ಯದಲ್ಲಿ ಪಾಲ್ಗೊಂಡು ಮಾನ್ಯ ಆಯುಕ್ತರು (ಬಿಬಿಎಂಪಿ) ರವರು ವಹಿಸಿರುವ ಜವಾಬ್ಧಾರಿಯನ್ನು ಯಶಸ್ವಿಯಾಗಿ ನಿರ್ವಹಿಸಲು ಎಲ್ಲರೂ ಸಹಕರಿಸಬೇಕೆಂದು ಹೇಳುತ್ತಾ ಸಭೆ ಮುಕ್ತಾಯಗೊಳಿಸಿದರು.

ಕಾರ್ಯದರ್ಶಿ & ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ – 145
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧ್ಯಕ್ಷರು & ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ – 145
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ



Scanned with CamScanner